# ತುಮಕೂರು ವಿಶ್ವವಿದ್ಯಾನಿಲಯ

ಪರೀಕ್ಷಾ ಭವನ, ಬಿ.ಹೆಚ್.ರಸ್ತೆ, ತುಮಕೂರು-572 103, ☎ :0816-2255650, 2273511. ಫ್ಯಾಕ್ಸ್ : 0816-2270719

ಸಂಖ್ಯೆ:ತುವಿ: ಪ.ವಿ:ವಿ.ನಿ.-03-2023-24: ದಿನಾಂಕ: 04.05.2023

## ಸುತ್ತೋಲೆ

**ವಿಷಯ:** ದಿನಾಂಕ : 05.05.2023 ರಂದು **ಎಲ್ಲಾ ಬೋಧಕ, ಬೋಧಕೇತರ ಸಿಬ್ಬಂದಿಗಳು ಹಾಗೂ ವಿದ್ಯಾರ್ಥಿಗಳು ಮತ್ತು ಸಂಶೋಧನಾರ್ಥಿಗಳು ಕಡ್ಡಾಯವಾಗಿ ಗುರುತಿನ ಚೀಟಿಯನ್ನು ಧರಿಸುವ ಕುರಿತು**

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ದಿನಾಂಕ : 05.05.2023 ರಂದು ಮಾನ್ಯ ಪ್ರಧಾನಮಂತ್ರಿಗಳು ತುಮಕೂರು ನಗರಕ್ಕೆ (ತುಮಕೂರು ವಿಶ್ವವಿದ್ಯಾನಿಲಯದ ಹೆಲಿಪ್ಯಾಡ್ ಮೂಲಕ) ಭೇಟಿ ನೀಡುತ್ತಿರುವ ಹಿನ್ನೆಲೆಯಲ್ಲಿ ಭದ್ರತೆಯ ಹಿತದೃಷ್ಟಿಯಿಂದ ತುಮಕೂರು ವಿಶ್ವವಿದ್ಯಾನಿಲಯದ ಎಲ್ಲಾ ಬೋಧಕ/ ಬೋಧಕೇತರ ಸಿಬ್ಬಂದಿಗಳು, ಅತಿಥಿ ಉಪನ್ಯಾಸಕರು, ಸಂಶೋಧನಾ ವಿದ್ಯಾರ್ಥಿಗಳು, ಸ್ನಾತಕ ಮತ್ತು ಸ್ನಾತಕೋತ್ತರ ವಿದ್ಯಾರ್ಥಿಗಳು ತಮ್ಮ ಗುರುತಿನ ಚೀಟಿಗಳೊಂದಿಗೆ ಕುವೆಂಪು ನಗರದ University East Gate / Back Gate) ಕಡೆಯ ಪ್ರವೇಶದ್ವಾರದಿಂದ ವಿಶ್ವವಿದ್ಯಾನಿಲಯದ ಆವರಣಕ್ಕೆ ಆಗಮಿಸುವುದು ಹಾಗೂ ನಿರ್ಗಮಿಸುವುದು. ಮುಂದುವರೆದು, ವಿಶ್ವವಿದ್ಯಾನಿಲಯದ ಆವರಣದಲ್ಲಿ ನಡೆಯುತ್ತಿರುವ ಪರೀಕ್ಷೆಗಳಿಗೆ ಸಂಬಂಧಿಸಿದಂತೆ ವಿದ್ಯಾರ್ಥಿಗಳು ಪರೀಕ್ಷಾ ಪ್ರವೇಶಪತ್ರಗಳು ಹಾಗೂ ಗುರುತಿನ ಚೀಟಿಗಳೊಂದಿಗೆ ಕಡ್ಡಾಯವಾಗಿ ಪರೀಕ್ಷೆ ಪ್ರಾರಂಭವಾಗುವ 30 ನಿಮಿಷಗಳ ಮೊದಲು ಪರೀಕ್ಷಾ ಕೇಂದ್ರದಲ್ಲಿ ಹಾಜರಾಗುವಂತೆ ಈ ಮೂಲಕ ತಿಳಿಸಲಾಗಿದೆ. ಮಾನ್ಯ ಪ್ರಧಾನಮಂತ್ರಿಗಳು ಭೇಟಿ ನೀಡುತ್ತಿರುವ ಹಿನ್ನೆಲೆಯಲ್ಲಿ ಭದ್ರತಾದೃಷ್ಟಿಯಿಂದ ಎಲ್ಲಾ ಶಿಷ್ಟಾಚಾರಗಳನ್ನು ಕಡ್ಡಾಯವಾಗಿ ಪಾಲಿಸುವುದು.

**ಆದೇಶದ ಮೇರೆಗೆ**

4/5/23

**ಕುಲಸಚಿವರು (ಪರೀಕ್ಷಾಂಗ)**

**ಗೆ,**

1. ಅಧ್ಯಕ್ಷರು/ಸಂಯೋಜಕರು, ಸ್ನಾತಕೋತ್ತರ ಅಧ್ಯಯನ ಮತ್ತು ಸಂಶೋಧನಾ ವಿಭಾಗಗಳು/ ಪರೀಕ್ಷಾ ಮಂಡಳಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು. (ಕಡ್ಡಾಯವಾಗಿ ವಿದ್ಯಾರ್ಥಿಗಳ ಗಮನಕ್ಕೆ ತರುವುದು)
2. ಪ್ರಾಂಶುಪಾಲರು, ಘಟಕ ಕಾಲೇಜುಗಳು/ಎಲ್ಲಾ ಸಂಯೋಜಿತ ಸ್ನಾತಕೋತ್ತರ ಪದವಿ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು. (ಕಡ್ಡಾಯವಾಗಿ ವಿದ್ಯಾರ್ಥಿಗಳ ಗಮನಕ್ಕೆ ತರುವುದು
3. ಎಲ್ಲಾ ಬೋಧಕ/ ಬೋಧಕೇತರ ಸಿಬ್ಬಂದಿಗಳು/ ಅತಿಥಿ ಉಪನ್ಯಾಸಕರು/ ಸಂಶೋಧನಾರ್ಥಿಗಳು/ ಸ್ನಾತಕ ಮತ್ತು ಸ್ನಾತಕೋತ್ತರ ವಿದ್ಯಾರ್ಥಿಗಳು

**ಪ್ರತಿಗಳು:**

1. ಮಾನ್ಯ ಹಣಕಾಸು ಅಧಿಕಾರಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಮಾನ್ಯ ಕುಲಪತಿಗಳ ಆಪ್ತಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
3. ಮಾನ್ಯ ಕುಲಸಚಿವರ ಆಪ್ತ ಸಹಾಯಕರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
4. ಕಛೇರಿ ಪ್ರತಿ.